**ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**

**ಸಿ.ಸಿ.ನಂಃ 576/2023**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**ಆರೋಪಿಃ** ಶ್ರೀ ಆನಂದಮೂರ್ತಿ,
ಬಿನ್ ಶ್ರೀ ರಂಗಪ್ಪ,
42 ವರ್ಷಗಳು,
ವಾಸಃ ಚನ್ನಾಪುರ ಗ್ರಾಮ,
ಅಜ್ಜಂಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀ. ರಾಹುಲ್ ಶೆಟ್ಟಿಗಾರ್, ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 13.05.2022 ರಂದು ಬೆಳಿಗ್ಗೆ 6.30 ಗಂಟೆ ಸುಮಾರಿಗೆ ಅಜ್ಜಂಪುರ ಪೊಲೀಸ್ ಠಾಣಾ ವ್ಯಾಪ್ತಿಯ ಎಸ್.ಆರ್.ಪೆಟ್ರೋಲ್ ಬಂಕ್ ಹಿಂಭಾಗದ ರಸ್ತೆಯಲ್ಲಿ ನೀವು ಆರೋಪಿ ರೂ. 6622/- ಬೆಲೆಯ 1) 90 ಎಂ ಎಲ್ ನ 10 ರಾಜಾ ವಿಸ್ಕಿ ಮದ್ಯದ ಪೌಚ್, 2)180 ಎಂ ಎಲ್ ನ 7 ಓಲ್ಡ್ ಟಾವರಿನ್ ಬಾಂಡ್ರಿಯ ಟೆಟ್ರಾ ಪ್ಯಾಕ್, 3)180 ಎಂ ಎಲ್ ನ 17 ಆಫಿಸರ್ ಚಾಯ್ಸ್ ಸ್ಪೆಷಲ್ ವಿಸ್ಕಿಯ ಟೆಟ್ರಾ ಪ್ಯಾಕ್, 4)180 ಎಂ ಎಲ್ ನ 11 - 8 ಪಿಎಂ ವಿಸ್ಕಿಯ ಟೆಟ್ರಾ ಪ್ಯಾಕ್, 5)180 ಎಂ ಎಲ್ ನ 11 ಬ್ಯಾಗ್‌ಪೈಪರ್ ಡಿಲಕ್ಸ್ ವಿಸ್ಕಿಯ ಟೆಟ್ರಾ ಪ್ಯಾಕ್ ಹಾಗೂ 6)180 ಎಂ ಎಲ್ ನ 20 ಓಲ್ಡ್ ಟಾವರಿನ್ ವಿಸ್ಕಿಯ ಟೆಟ್ರಾ ಪ್ಯಾಕ್‌ಗಳನ್ನು ಒಂದು ಚೀಲದಲ್ಲಿ ಇಟ್ಟುಕೊಂಡು ಸರ್ಕಾರದ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಮಾರಾಟ ಮಾಡುತ್ತಿದ್ದಾಗ ಚಾಸಾ-1 ರವರು ಚಾಸಾ-2

ರಿಂದ 7 ರವರೊಂದಿಗೆ ದಾಳಿ ಮಾಡಿದ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಹಾಗೂ 34 ರ ಅಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ದೋಷಾರೋಪಿಸಲಾಗಿದೆ.

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿದ್ದರಿಂದ ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರ:1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿ ಉತ್ತರ: Yes

ಪ್ರ:2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೋ?

ಆರೋಪಿ ಉತ್ತರ: Pleaded not guilty and claimed to be tried

(ಆರೋಪಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ: 05.12.2024.

ಸಹಿ/-
(ರಾಹುಲ್ ಶೆಟ್ಟಿಗಾರ್)
ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ
ಪ್ರ.ದ.ನ್ಯಾದಂ., ತರೀಕೆರೆ.

**ಆರೋಪಿ ಸಹಿ:**